**ಕರ್ನಾಟಕ ಸರ್ಕಾರ**

**ನಿರ್ದೇಶನಾಲಯ. ತಾಂತ್ರಿಕ ಶಿಕ್ಷಣ ಇಲಾಖೆ**

**ಅರಮನೆ ರಸ್ತೆ, ಬೆಂಗಳೂರು-1.**

ಸಂಖ್ಯೆ: ಡಿಟಿಇ 42 ಇಎಸ್‌ಟಿ(3) 2017 ದಿನಾಂಕ: 31-10-2018.

**-:ಸುತ್ತೋಲೆ:-**

ವಿಷಯ :- ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಕನ್ನಡ ಅನುಷ್ಠಾನದ ಪ್ರಗತಿ ಪರಿಶೀಲನೆ ಬಗ್ಗೆ

ಉಲ್ಲೇಖ:- 1. ಅಧ್ಯಕ್ಷರ ಆಪ್ತ ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಇವ ಪತ್ರ ಸಂಖ್ಯೆ: ಕಪ್ರಾ/ಆಕಾ/561/2018, ದಿನಾಂಕ: 11.10.2018.

2. ಈ ಕಛೇರಿಯ ಕಾಯಾದೇಶ ಸಂಖ್ಯೆ: ಡಿಟಿಇ 42 ಇಎಸ್‌ಟಿ(3) 2017, ದಿನಾಂಕ: 10.08.2018.

***

ಉಲ್ಲೇಖ (1)ರ ಪತ್ರದಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಕನ್ನಡ ಭಾಷೆಯನ್ನು ರಾಜ್ಯದ ಆಡಳಿತದ ಎಲ್ಲಾ ಮಟ್ಟದಲ್ಲಿ ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರವು ಹೊರಡಿಸಿರುವ ಆದೇಶಗಳನ್ನು ರಾಜ್ಯ ಸರ್ಕಾರ ಮತ್ತು ಸ್ಥಳೀಯ ನಿಕಾಯಗಳ ಅಧಿಕಾರಿಗಳು ಮತ್ತು ನೌಕರರು ಉಲ್ಲಂಘಿಸಿದರೆ ಅಂತವರ ವಿರುದ್ಧ ಅಗತ್ಯ ಕ್ರಮ ಕೈಗೊಳ್ಳುವಂತೆ ನೇಮಕಾತಿ ಪ್ರಾಧಿಕಾರಕ್ಕೆ ಸಲಹೆ ನೀಡಲು ಹಾಗೂ ರಾಜ್ಯ ಮತ್ತು ಕೇಂದ್ರ ಸರ್ಕಾರದ ಇಲಾಖೆಗಳು ಸಂಸ್ಥೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲು ಕನ್ನಡ ಅಭಿವೃದ್ಧಿ ಪ್ರಾಧೀಕಾರ ನೀಡಲಾಗಿದೆ ಎಂದು ತಿಳಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಸಧ್ಯದಲ್ಲಿಯೇ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ತಮ್ಮ ಪರಿಶೀಲನಾ ತಂಡದೊಂದಿಗೆ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯಕ್ಕೆ ಭೇಟಿ ನೀಡುವ ಹಿನ್ನೆಲೆಯಲ್ಲಿ ಕನ್ನಡ ಅನುಷ್ಠಾನಕ್ಕೆ ಸಂಬಂಧಿಸಿದ ಹೊರಗುತ್ತಿಗೆ ನೌಕರರಲ್ಲಿ ಕನ್ನಡಿಗರೆಷ್ಟು ಹಾಗೂ ಕನ್ನಡಿಗರೆಂಬುದಕ್ಕೆ ದಾಖಲೆಗಳನ್ನು ಒದಗಿಸಲು ಸೂಚಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಈಗಾಗಲೇ ಉಲ್ಲೇಖ (2)ರ ಪತ್ರದ ನಿಬಂಧನೆ ಮತ್ತು ಷರತ್ತುಗಳ ಕ್ರಮ ಸಂಖ್ಯೆ 10ರಲ್ಲಿ ತಿಳಿಸಿರುವ ಟೆಂಡರ್‌ದಾರರು ನಿಯೋಜಿಸುವ ಸಿಬ್ಬಂದಿಗೆ ಕನ್ನಡವನ್ನು ಓದಲು, ಬರೆಯಲು ಮತ್ತು ಮಾತನಾಡಲು ಬರುತ್ತದೆಯೇ ಎಂಬುದನ್ನು ಖಚಿತ ಪಡಿಸಿಕೊಂಡು ನೇಮಿಸಿಕೊಳ್ಳಲು ಮಾರ್ಗಸೂಚಿ ನೀಡಲಾಗಿದೆ. ಅದರಂತೆ ತಮ್ಮ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಮೂಲಕ ಪಡೆದಿರುವ ಗ್ರೂಪ್-ಡಿ ಸಿಬ್ಬಂದಿಯ ವಿವರವನ್ನು ಈ ಕೆಳಕಂಡ GOOGLE FORM ನಲ್ಲಿ ದಿನಾಂಕ: 01-11-2018ರ ಒಳಗಾಗಿ ಸಮೂದಿಸಿ ಸಲ್ಲಿಸತಕ್ಕದೆಂದು ಸೂಚಿಸಲಾಗಿದೆ.

**"https://goo.gl/forms/ctSLk7VxpaibOC4n1"**

ಸಹಾಯಕ ಆಡಳಿತಾಧಿಕಾರಿ

ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು

ಇವರಿಗೆ,

1) ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನಕ್ಕೆ ಎಲ್ಲಾ ಪ್ರಾಂಶುಪಾಲರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು/ ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು.
2) ಕಛೇರಿ ಪ್ರತಿ.